Akashvani: Bangalore
National Bulletin In Kannada
11.09.2025 : 13.10hrs
**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

************

**ಮುಖ್ಯಾಂಶಗಳು :**

1. ಪ್ರಧಾನಿ ನರೇಂದ್ರ ಮೋದಿ ವಾರಾಣಸಿಗೆ ಭೇಟಿ ; ಮಾರಿಷಸ್‌ನ ಪ್ರಧಾನಿ ನವೀನಚಂದ್ರ ರಾಮಗೂಲಂ ಜೊತೆ ದ್ವಿಪಕ್ಷೀಯ ಮಾತುಕತೆ
2. ಬೆಂಗಳೂರಿನಲ್ಲಿ ಇಂದಿನಿಂದ ೧೧ನೇ ಕಾಮನ್‌ವೆಲ್ತ್ ಸಂಸದೀಯ ಸಮ್ಮೇಳನ ; ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಉದ್ಘಾಟನೆ
3. ಜಿಎಸ್‌ಟಿ ಸುಧಾರಣೆ ; ಗೃಹಬಳಕೆ ಸಾಧನಗಳ ಮೇಲಿನ ತೆರಿಗೆ ಇಳಿಕೆಯಿಂದ ಜನಸಾಮಾನ್ಯರಿಗೆ ತಗ್ಗಿದ ಹೊರೆ
4. ಏಷ್ಯಾಕಪ್ ಕ್ರಿಕೆಟ್ ; ಇಂದು ರಾತ್ರಿ ಬಾಂಗ್ಲಾದೇಶ-ಹಾಂಕಾಂಗ್ ಮುಖಾಮುಖಿ

******

ಪ್ರಧಾನಿ ನರೇಂದ್ರ ಮೋದಿ ಹಾಗೂ ಭಾರತ ಪ್ರವಾಸದಲ್ಲಿರುವ ಮಾರಿಷಸ್ ಪ್ರಧಾನಿ ನವೀನಚಂದ್ರ ರಾಮಗೂಲಂ ವಾರಾಣಸಿಯಲ್ಲಿಂದು ದ್ವಿಪಕ್ಷೀಯ ಮಾತುಕತೆ ನಡೆಸಿದ್ದಾರೆ. ಈ ವೇಳೆ ಇಬ್ಬರು ನಾಯಕರು ಉಭಯ ರಾಷ್ಟ್ರಗಳ ನಡುವಿನ ಸಂಬಂಧಗಳು ಹಾಗೂ ಪ್ರಾದೇಶಿಕ ಸಹಕಾರ ಬಲಪಡಿಸುವತ್ತ ಗಮನ ಹರಿಸಿದ್ದಾರೆ. ಇದಕ್ಕೂ ಮೊದಲು ಉತ್ತರಪ್ರದೇಶದ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಅವರು, ಪ್ರಧಾನಿಯವರನ್ನು ಸ್ವಾಗತಿಸಿದರು. ಮಾರಿಷಸ್ ಪ್ರಧಾನಿ ರಾಮಗೂಲಂ ಅವರು, ನಿನ್ನೆ ವಾರಾಣಸಿಗೆ ಆಗಮಿಸಿದ್ದಾರೆ. ಇದಕ್ಕೂ ಮುನ್ನ ವಿದೇಶಾಂಗ ಕಾರ್ಯದರ್ಶಿ ವಿಕ್ರಂ ಮಿಸ್ರಿ ಅವರು, ಪ್ರಧಾನಿ ರಾಮಗೂಲಂ ಅವರನ್ನು ಭೇಟಿ ಮಾಡಿ ಸಮಾಲೋಚಿಸಿದರು. ಈ ವೇಳೆ ಭಾರತ-ಮಾರಿಷಸ್ ಸಂಬಂಧಗಳ ಬಲವರ್ಧನೆ ಕುರಿತು ಉಭಯ ದೇಶಗಳು ಬದ್ಧತೆಯನ್ನು ಪುನರುಚ್ಚರಿಸಿದವು. ಸಂಜೆ ನಂತರ, ಪ್ರಧಾನಿ ನರೇಂದ್ರ ಮೋದಿ ಉತ್ತರಾಖಂಡದ ಪ್ರವಾಹ ಪೀಡಿತ ಪ್ರದೇಶಗಳ ವೈಮಾನಿಕ ಸಮೀಕ್ಷೆ ಕೈಗೊಳ್ಳಲಿದ್ದಾರೆ. ನಂತರ, ಅಧಿಕಾರಿಗಳೊಂದಿಗೆ ಉನ್ನತ ಮಟ್ಟದ ಪರಿಶೀಲನಾ ಸಭೆ ನಡೆಸಲಿದ್ದಾರೆ.

******

ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಕಾಮನ್‌ವೆಲ್ತ್ ಸಂಸದೀಯ ಸಂಘದ ೧೧ನೇ ಸಮ್ಮೇಳನವನ್ನು ಬೆಂಗಳೂರಿನಲ್ಲಿ ಇಂದು ಸಂಜೆ ಉದ್ಘಾಟಿಸಲಿದ್ದಾರೆ. ಈ ಸಮ್ಮೇಳನದ ಕಾರ್ಯಸೂಚಿ "ಶಾಸಕಾಂಗದ ಸದನಗಳಲ್ಲಿ ಚರ್ಚೆಗಳು ಮತ್ತು ಮಾತುಕತೆಗಳು: ಜನರ ನಂಬಿಕೆ ಮೂಡಿಸುವುದು, ಜನರ ಆಕಾಂಕ್ಷೆಗಳನ್ನು ಪೂರೈಸುವುದು" ಎಂಬುದಾಗಿದೆ. ಉದ್ಘಾಟನಾ

ಸಮಾರಂಭದಲ್ಲಿ ಕರ್ನಾಟಕದ ಮುಖ್ಯಮಂತ್ರಿ ಸಿದ್ದರಾಮಯ್ಯ, ರಾಜ್ಯಸಭೆಯ ಉಪಸಭಾಪತಿ ಹರಿವಂಶ್ ಮತ್ತಿತರರು ಗಣ್ಯರನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ಕರ್ನಾಟಕ ವಿಧಾನಸಭೆಯ ಸ್ಪೀಕರ್ ಯು.ಟಿ. ಖಾದರ್ ಸ್ವಾಗತ ಭಾಷಣ ಮಾಡಲಿದ್ದಾರೆ. ವಿಧಾನಸೌಧದ ಭವ್ಯ ಮೆಟ್ಟಿಲುಗಳ ಮೇಲೆ ನಡೆಯಲಿರುವ ಉದ್ಘಾಟನಾ ಸಮಾರಂಭದಲ್ಲಿ ರಾಜ್ಯಗಳು/ಕೇಂದ್ರಾಡಳಿತ ಪ್ರದೇಶಗಳ ಶಾಸನ ಸಭೆಗಳ ಅಧ್ಯಕ್ಷರು / ಸ್ಪೀಕರ್‌ಗಳನ್ನು ಒಳಗೊಂಡ ಪೀಠಾಧ್ಯಕ್ಷರು ಭಾಗವಹಿಸಲಿದ್ದಾರೆ. ಈ ಕುರಿತು ವಿಧಾನಸಭೆಯ ಕಾರ್ಯದರ್ಶಿ ಎಂ.ಕೆ. ವಿಶಾಲಾಕ್ಷಿ ಹೆಚ್ಚಿನ ಮಾಹಿತಿ ನೀಡಿದ್ದಾರೆ.

ಧ್ವನಿ : ಎಂ.ಕೆ. ವಿಶಾಲಾಕ್ಷಿ (೩೦ ಸೆಕೆಂಡ್‌ಗಳು)

*****

ಬಿಹಾರ ವಿಧಾನಸಭಾ ಚುನಾವಣೆ ಹತ್ತಿರವಾಗುತ್ತಿರುವಂತೆಯೇ ಮತದಾರರನ್ನು ಸೆಳೆಯಲು ಪ್ರಮುಖ ರಾಜಕೀಯ ಪಕ್ಷಗಳು ತೀವ್ರತರನಾದ ಕಸರತ್ತು ನಡೆಸಿವೆ. ಈ ಮಧ್ಯೆ, ಪ್ರಧಾನಮಂತ್ರಿ ನರೇಂದ್ರ ಮೋದಿ ಇದೇ ೧೫ರಂದು ಬಿಹಾರಕ್ಕೆ ಭೇಟಿ ನೀಡಲಿದ್ದಾರೆ ಮತ್ತು ಪೂರ್ನಿಯಾದಲ್ಲಿ ಹೊಸದಾಗಿ ಅಭಿವೃದ್ಧಿಪಡಿಸಿರುವ ವಿಮಾನ ನಿಲ್ದಾಣ ಉದ್ಘಾಟನೆ ಸೇರಿದಂತೆ ಸುಮಾರು ೪೫ ಸಾವಿರ ಕೋಟಿ ರೂಪಾಯಿ ಮೌಲ್ಯದ ಅಭಿವೃದ್ಧಿ ಯೋಜನೆಗಳಿಗೆ ಚಾಲನೆ ನೀಡಿ ಬೃಹತ್ ಸಾರ್ವಜನಿಕ ಸಮಾರಂಭವನ್ನುದ್ದೇಶಿಸಿ ಮಾತನಾಡುವರು. ಪ್ರಧಾನಿಯವರ ಕಾರ್ಯಕ್ರಮದ ಸಿದ್ಧತೆಗಳನ್ನು ಕುರಿತು ಉಪಮುಖ್ಯಮಂತ್ರಿ ಸಾಮ್ರಾಟ್ ಚೌಧರಿ ನಿನ್ನೆ ಪರಿಶೀಲನೆ ನಡೆಸಿದರು. ಈ ಮಧ್ಯೆ ಇಂಡಿಯಾ ಬ್ಲಾಕ್‌ನ ನಾಯಕರು ಸಹ ಪರ್ಯಾಯವಾಗಿ ಪ್ರಚಾರ ಸಭೆಗಳಿಗೆ ಸಿದ್ಧತೆ ನಡೆಸಿದ್ದಾರೆ. ಇತ್ತೀಚೆಗಷ್ಟೆ ಮತದಾರರ ಅಧಿಕಾರ ಯಾತ್ರೆ ನಡೆಸಿದ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ, ಮತ್ತೆ ಬಿಹಾರದಲ್ಲಿ ನಡೆಯಲಿರುವ ರ‍್ಯಾಲಿಗಳಲ್ಲಿ ಭಾಗವಹಿಸಲಿದ್ದಾರೆ. ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಎಎಪಿ ಸಂಚಾಲಕ ಅರವಿಂದ್ ಕೇಜ್ರಿವಾಲ್ ಮತ್ತಿತರ ನಾಯಕರು ಸಹ ಪ್ರಚಾರ ಕಾರ್ಯಕ್ಕೆ ಮುಂದಾಗಿದ್ದಾರೆ.

******

ಪ್ರಧಾನಮಂತ್ರಿ ನರೇಂದ್ರ ಮೋದಿ ಈ ವರ್ಷದ ಸ್ವಾತಂತ್ರ್ಯೋತ್ಸವ ದಿನದಂದು ಕೆಂಪುಕೋಟೆಯಿಂದ ಮುಂದಿನ ಪೀಳಿಗೆಯ ಜಿಎಸ್‌ಟಿ ಸುಧಾರಣೆಗಳನ್ನು ಪ್ರಕಟಿಸಿದ್ದರು. ಇದೇ ೩ ರಂದು ನಡೆದ ಜಿಎಸ್‌ಟಿ ಮಂಡಳಿ ಸಭೆಯಲ್ಲಿ ಆ ಸುಧಾರಣೆಗಳನ್ನು ಅನುಷ್ಠಾನಗೊಳಿಸುವ ಕುರಿತು ನಿರ್ಧಾರಗಳನ್ನು ಕೈಗೊಳ್ಳಲಾಗಿದೆ. ಮಂಡಳಿಯ ನಿರ್ಧಾರದಿಂದಾಗಿ ಹಲವು ವಲಯಗಳಲ್ಲಿ ತೆರಿಗೆ ಹೊರೆ ಗಮನಾರ್ಹವಾಗಿ ಇಳಿಕೆಯಾಗಿ ಜನಸಾಮಾನ್ಯರಿಗೆ ಹೆಚ್ಚಿನ ಅನುಕೂಲವಾಗಲಿದೆ. ಅದರಲ್ಲೂ ವಿಶೇಷವಾಗಿ ಗೃಹ ಬಳಕೆ ವಿದ್ಯುನ್ಮಾನ ಸಾಧನಗಳ ಬೆಲೆ ಇಳಿಕೆಯಿಂದ ಮಧ್ಯಮ ವರ್ಗಕ್ಕೆ ಹೆಚ್ಚಿನ ಅನುಕೂಲವಾಗಲಿದೆ. ಹವಾನಿಯಂತ್ರಿತ ಯಂತ್ರಗಳು, ಡಿಶ್ ವಾಷರ್‌ಗಳು, ಎಲ್‌ಸಿಡಿ, ಎಲ್‌ಇಡಿ ಟಿವಿಗಳ ತೆರಿಗೆ ಶೇಕಡ ೨೮ ರಿಂದ ೧೮ಕ್ಕೆ ಇಳಿಕೆ ಮಾಡಲಾಗಿದೆ.

ಇದರಿಂದಾಗಿ ಗೃಹ ಬಳಕೆ ವಸ್ತುಗಳ ಮೇಲಿನ ಬೇಡಿಕೆ ಹೆಚ್ಚಳವಾಗುವುದಲ್ಲದೇ ಮಾರುಕಟ್ಟೆಯೂ ವೃದ್ಧಿಯಾಗಲಿದೆ.

ಧ್ವನಿ : ಜಿಎಸ್‌ಟಿ (೨೫ ಸೆಕೆಂಡ್‌ಗಳು)

******

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ಇಂದು ಸ್ವಾಮಿ ವಿವೇಕಾನಂದ ಅವರು ೧೮೯೩ರ ಇದೇ ದಿನ ವಿಶ್ವ ಸಂಸತನ್ನು ಉದ್ದೇಶಿಸಿ ಮಾಡಿದ ಐತಿಹಾಸಿಕ ಭಾಷಣವನ್ನು ಹಂಚಿಕೊಂಡಿದ್ದಾರೆ.

ಧ್ವನಿ : ಸ್ವಾಮಿ ವಿವೇಕಾನಂದ (೪೦ ಸೆಕೆಂಡ್‌ಗಳು)

ಸ್ವಾಮಿ ವಿವೇಕಾನಂದ ಅವರು ಐತಿಹಾಸಿಕ ಭಾಷಣದ ೧೨೯ನೇ ವಾರ್ಷಿಕೋತ್ಸವವನ್ನು ಇಂದು ಆಚರಿಸಲಾಗುತ್ತಿದೆ. ಈ ಕುರಿತು ವಿವರ ಹಂಚಿಕೊಂಡಿರುವ ಪ್ರಧಾನಿ ನರೇಂದ್ರ ಮೋದಿ, ಸೌಹಾರ್ದತೆ ಮತ್ತು ಭ್ರಾತೃತ್ವಕ್ಕೆ ಒತ್ತು ನೀಡುವ ಭಾಷಣ ಆನಂದದಾಯಕವಾಗಿದೆ ಮತ್ತು ಅದು ಇತಿಹಾಸ ಪುಟದಲ್ಲಿನ ಚೈತನ್ಯದಾಯಕ ಕ್ಷಣವಾಗಿದೆ ಎಂದು ಹೇಳಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಅವರು, ಇಂದು ಆಚಾರ್ಯ ವಿನೋಬ ಭಾವೆ ಅವರ ಜಯಂತಿ ಹಿನ್ನೆಲೆಯಲ್ಲಿ ಅವರಿಗೆ ಗೌರವನಮನ ಸಲ್ಲಿಸಿದ್ದಾರೆ.

******

ಕೇಂದ್ರ ಗೃಹ ಸಚಿವ ಅಮಿತ್ ಶಾ ಇಂದು ವಿಡಿಯೋ ಕಾನ್ಫರೆನ್ಸ್ ಮೂಲಕ ಲಖನೌ, ತಿರುವನಂತಪುರಂ, ತಿರುಚಿ, ಕ್ಯಾಲಿಕಟ್ ಮತ್ತು ಅಮೃತಸರ ವಿಮಾನ ನಿಲ್ದಾಣದಲ್ಲಿ ಹೊಸದಾಗಿ ಆರಂಭಿಸಿರುವ ತ್ವರಿತ ಗತಿಯ ವಲಸೆ ವಿಶ್ವಾಸಾರ್ಹ ಪ್ರಯಾಣ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಈ ವೇಳೆ ಮಾತನಾಡಿದ ಈ ಕಾರ್ಯಕ್ರಮ ವಲಸಿಗರಿಗೆ ಅಡೆತಡೆ ರಹಿತ ಮತ್ತು ಸುರಕ್ಷಿತ ಹಾಗೂ ವೇಗದ ಸಂಚಾರಕ್ಕೆ ಅನುವು ಮಾಡಿಕೊಡಲಿದೆ. ಕಳೆದ ವರ್ಷ ದೆಹಲಿಯಲ್ಲಿ ಆರಂಭಿಸಲಾದ ಈ ಕಾರ್ಯಕ್ರಮವನ್ನು ಇದೀಗ ದೇಶದ ೧೩ ವಿಮಾನ ನಿಲ್ದಾಣಗಳಿಗೆ ವಿಸ್ತರಣೆ ಮಾಡಲಾಗಿದೆ ಎಂದರು.

******

ಸೇಬು ಸಾಗಾಣೆಗೆ ಅನುಕೂಲವಾಗುವಂತೆ ಇದೇ ಶನಿವಾರದಿಂದ ಕಾಶ್ಮೀರ ಕಣಿವೆಯ ಬದ್ಗಾಂನಿಂದ ದೆಹಲಿಯ ಆದರ್ಶನಗರದ ನಡುವೆ ಪ್ರತಿದಿನ ಪಾರ್ಸೆಲ್ ರೈಲು ಸೇವೆ ಆರಂಭಿಸಲಾಗುವುದು ಎಂದು ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ತಿಳಿಸಿದ್ದಾರೆ. ಈ ರೈಲು ಹಣ್ಣು ಮತ್ತು ಕರಕುಶಲ ವಸ್ತುಗಳ ಸಾಗಾಣೆಗೆ ಅನುಕೂಲವಾಗಲಿದೆ ಎಂದು ಅಶ್ವಿನಿ ವೈಷ್ಣವ್ ತಮ್ಮ ಸಾಮಾಜಿಕ ಜಾಲತಾಣದಲ್ಲಿ ತಿಳಿಸಿದ್ದಾರೆ.

******

ನೇಪಾಳದಲ್ಲಿ ಉದ್ಭವಿಸಿರುವ ರಾಜಕೀಯ ಬಿಕ್ಕಟ್ಟು ಅಂತ್ಯಗೊಳಿಸುವ ಸಲುವಾಗಿ ಮಧ್ಯಂತರ ಸರ್ಕಾರ ರಚನೆಯ ನಾಯಕತ್ವ ನಿರ್ಧಾರದ ಕುರಿತು ಇಂದು ಅಧ್ಯಕ್ಷ ರಾಮಚಂದ್ರ ಪೌದಲ್, ಸೇನಾ ಮುಖ್ಯಸ್ಥ ಅಶೋಕ್ ರಾಜ್ ಸಿಗ್ದೆಲ್ ಮತ್ತು ಜೆನ್ ಝಡ್ ಯುವ ಪ್ರತಿನಿಧಿಗಳೊಂದಿಗೆ ಇಂದು ಮಾತುಕತೆ ನಡೆಯಲಿವೆ. ಪ್ರತಿಭಟನಾನಿರತ ಜೆನ್ ಝಡ್ ಪ್ರತಿನಿಧಿಗಳು ಹಂಗಾಮಿ ಸರ್ಕಾರದಲ್ಲಿ ನಿವೃತ್ತ ಮುಖ್ಯ ನ್ಯಾಯಮೂರ್ತಿ ಸುಶೀಲಾ ಕರ್ಕಿ ಅವರು, ಪ್ರಧಾನಿಯಾಗಬೇಕೆಂಬ ಪ್ರಸ್ತಾವವನ್ನು ಮಂಡಿಸಿದ್ದಾರೆ.

******

ನೆರೆಯ ನೇಪಾಳದಲ್ಲಿ ಹಿಂಸಾತ್ಮಕ ಪ್ರತಿಭಟನೆಗಳು ನಡೆಯುತ್ತಿರುವ ಹಿನ್ನೆಲೆಯಲ್ಲಿ ದೇಶಕ್ಕೆ ಹೊಂದಿಕೊಂಡಿರುವ ಬಿಹಾರ, ಉತ್ತರಪ್ರದೇಶ ಮತ್ತು ಉತ್ತರಾಖಂಡ್ ರಾಜ್ಯದ ಗಡಿ ಭಾಗದಲ್ಲಿ ಭದ್ರತೆಯನ್ನು ಮತ್ತಷ್ಟು ಬಿಗಿಗೊಳಿಸಲಾಗಿದೆ. ಗಡಿ ಭಾಗದಲ್ಲಿ ಜನರ ಚಲನ-ವಲನದ ಮೇಲೆ ತೀವ್ರ ನಿಗಾ ಇರಿಸಲಾಗಿದೆ ಮತ್ತು ಚೆಕ್‌ಪೋಸ್ಟ್‌ಗಳಲ್ಲಿ ಪೊಲೀಸರು ತೀವ್ರ ತಪಾಸಣೆ ನಡೆಸುತ್ತಿದ್ದಾರೆ. ನೇಪಾಳದಲ್ಲಿನ ಪರಿಸ್ಥಿತಿ ಹಿನ್ನೆಲೆಯಲ್ಲಿ ಆ ದೇಶದ ಜನಕಪುರ ಮತ್ತು ಭಾರತದ ಜಯನಗರ ನಡುವಿನ ರೈಲು ಸಂಚಾರವನ್ನು ಸ್ಥಗಿತಗೊಳಿಸಲಾಗಿದೆ.

******

ದುಬೈನಲ್ಲಿ ನಡೆಯುತ್ತಿರುವ ಏಷ್ಯಾಕಪ್ ಟಿ-೨೦ ಕ್ರಿಕೆಟ್ ಪಂದ್ಯಾವಳಿಯಲ್ಲಿ ಇಂದು ಬಾಂಗ್ಲಾದೇಶ ಮತ್ತು ಹಾಂಕಾಂಗ್ ತಂಡಗಳು ಮುಖಾಮುಖಿಯಾಗಲಿವೆ.  ಪಂದ್ಯ ಭಾರತೀಯ ಕಾಲಮಾನ ರಾತ್ರಿ ೮ ಗಂಟೆಗೆ ಆರಂಭವಾಗಲಿದೆ. ಕಳೆದ ರಾತ್ರಿ ನಡೆದ ಪಂದ್ಯದಲ್ಲಿ ಭಾರತ ತಂಡ, ಯುಎಇ ವಿರುದ್ಧ ೯ ವಿಕೆಟ್‌ಗಳ ಭರ್ಜರಿ ಗೆಲುವು ಸಾಧಿಸಿ ಶುಭಾರಂಭ ಮಾಡಿದೆ.

******

ವಿಶ್ವ ಬಾಕ್ಸಿಂಗ್ ಚಾಂಪಿಯನ್ ಶಿಪ್ ಪಂದ್ಯಾವಳಿಯಲ್ಲಿ ಭಾರತದ ಬಾಕ್ಸಿಂಗ್ ಪಟು ನೂಪುರ್ ಶಿಯೊರನ್ ಸೆಮಿಫೈನಲ್ ತಲುಪಿದ್ದಾರೆ. ಲಿವರ್‌ಪೂಲ್‌ನಲ್ಲಿ ನಡೆಯುತ್ತಿರುವ ಮಹಿಳೆಯರ ೮೦ ಕೆ.ಜಿ. ವಿಭಾಗದಲ್ಲಿ ಅವರು ಉಜ್ಬೇಕಿಸ್ತಾನದ ಓಲ್ಟಿನೋಯ್ ಸೋಟಿಂಬೋವಾ ಅವರನ್ನು ಮಣಿಸಿ ಮುಂದಿನ ಹಂತ ಪ್ರವೇಶಿಸಿದರು. ಪಂದ್ಯಾವಳಿಯಲ್ಲಿ ಭಾರತದ ಇತರ ೧೦ ಆಟಗಾರರು ಸ್ಪರ್ಧಿಸುತ್ತಿದ್ದಾರೆ.

******

ಹಾಂಗ್ ಕಾಂಗ್ ಓಪನ್  ಬ್ಯಾಡ್ಮಿಂಟನ್‌ನಲ್ಲಿ, ಭಾರತದ ಪುರುಷರ ಡಬಲ್ಸ್ ಜೋಡಿ ಸಾತ್ವಿಕ್ ಸಾಯಿರಾಜ್ ರಾಂಕಿರೆಡ್ಡಿ ಮತ್ತು ಚಿರಾಗ್ ಶೆಟ್ಟಿ ಕ್ವಾರ್ಟರ್ ಫೈನಲ್  ಪ್ರವೇಶಿಸಿದ್ದಾರೆ. ಎಂಟನೇ ಶ್ರೇಯಾಂಕಿತ ಭಾರತೀಯ ಜೋಡಿ, ಮೊದಲ ಪಂದ್ಯದಲ್ಲಿ ಸೋತ ಬಳಿಕ ಶ್ರೇಯಾಂಕರಹಿತ ಥಾಯ್ ಜೋಡಿಯನ್ನು ೬೩ ನಿಮಿಷಗಳ ಪಂದ್ಯದಲ್ಲಿ ೧೮-೨೧, ೨೧-೧೫, ೨೧-೧೧

ಸೆಟ್‌ಗಳಿಂದ ಸೋಲಿಸಿತು. ವಿಶ್ವದ ೯ ನೇ ಶ್ರೇಯಾಂಕಿತ ರಾಂಕಿರೆಡ್ಡಿ ಮತ್ತು ಶೆಟ್ಟಿ ನಾಳೆ ಮುಂದಿನ ಸುತ್ತಿನಲ್ಲಿ ಮಲೇಷ್ಯಾದ ಜುನೈದಿ ಆರಿಫ್ ಮತ್ತು ರಾಯ್ ಕಿಂಗ್ ಯಾಪ್ ಅವರನ್ನು ಎದುರಿಸಲಿದ್ದಾರೆ.

******